# <u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಜೇವರ್ಗಿ</u>

**ಸಿಸಿ ನಂ.22/2026**

ಪಿರ್ಯಾರ್ದುದಾರಃ : ಕರ್ನಾಟಕ ಸರ್ಕಾರದ ಪರ ಜೇವರ್ಗಿ ಪೋಲಿಸರು

**ವಿರುದ್ಧ**

ಆರೋಪಿ : ಸೂಗುರೇಶ ತಂದೆ ಶಿವರಾಜ ಹೊಸಮನಿ,
ವಯಸ್ಸುಃ 30 ವರ್ಷ , ಉದ್ಯೋಗಃ ಬಿಲ್ ಕಲೆಕ್ಟರ್,
ವಾಸಃ ಮ.ನಂ.2-106, ಚನ್ನಮಲ್ಲಿಕಾರ್ಜುನ ಗುಡಿಯ
ಹತ್ತಿರ, ಓಣಿಕ್ಯಾಳ ಸತ್ಯಂಪೇಟ್, ತಾಃ ಸುರಪುರ,
ಜಿಃ ಯಾದಗಿರಿ

## <u>ಆಪಾದನೆ</u>

ಶ್ರೀಮತಿ ತಯ್ಯಬಾ ಸುಲ್ತಾನಾ, ಬಿ.ಎ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ,

ದಿನಾಂಕ 08-01-2025 ರಂದು ಸಂಜೆ 05-30 ಗಂಟೆ ಸಮಯದದಲ್ಲಿ ಜೇವರ್ಗಿ ಪೋಲಿಸ ಠಾಣಾ ವ್ಯಾಪ್ತಿಯ ಜೇವರ್ಗಿ-ಶಹಾಪೂರ ರಸ್ತೆಯ ಚಿಗರಳ್ಳಿ ಕ್ರಾಸ್ ಹತ್ತಿರ ಇರುವ ಹತ್ತಿ ಮಿಲ್ ಮುಂದುಗಡೆಯ ರಸ್ತೆ ಮೇಲೆ ಚಾಸಾ-7 ರವರು ಮೋಟಾರಸೈಕಲ್ ನಂ.ಕೆಎ-32 ಹೆಚ್.ಜಿ-9782 ನೇದ್ದರ ಹಿಂದುಗಡೆ ಚಾಸಾ-6ರವರನ್ನು ಕೂಡಿಸಿಕೊಂಡು ಹೋಗುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಕಾರ್ ನಂ.ಕೆಎ-33 ಎಮ್-5757 ನೇದ್ದನ್ನು ಅತೀ ವೇಗ ಮತ್ತು ಅಜಾಗುರಕತೆಯಿಂದ ಚಾಲನೆ ಮಾಡಿ ಚಾಸಾ-7ರವರ ಮೋಟಾರಸೈಕಲಗೆ ಡಿಕ್ಕಿಪಡಿಸಿ ಅಪಘಾತಪಡಿಸಿದ ಕಾರಣ ಚಾಸಾ-6ರವರಿಗೆ ಭಾರೀ ಗಾಯಗಳಾಗುವಂತೆ ಮಾಡಿ ಸದರಿ ಅಪಘಾತ ವಿಚಾರವನ್ನು ಪೊಲೀಸರಿಗೆ ತಿಳಿಸದೆ ಹಾಗೂ ಗಾಯಾಳುವಿಗೆ ಪ್ರಥಮ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸದೆ ಕಾರನ್ನು ಅಪಘಾತದ ಸ್ಥಳದಲ್ಲೇ ಓಡಿ ಹೋದ ಕಾರಣ ಕಾರಣ, ಭಾರತೀಯ ನ್ಯಾಯ ಸಂಹಿತಾ ಕಲಂ 281, 125(ಬಿ) ಹಾಗೂ ಭಾರತೀಯ ಮೋಟಾರ ವಾಹನ ಕಾಯ್ದೆ ಕಲಂ.187 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿದ ಬಗ್ಗೆ ಆರೋಪಿಸಲಾಗಿದೆ?

ಸದರಿ ಆಪಾದನೆಗಳ ಬಗ್ಗೆ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

ಸದರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ದಿಃ 26-03-2026 ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.**

ಪ್ರಶ್ನೆ-1ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಆರೋಪಿ ಉತ್ತರಃ

ಪ್ರಶ್ನೆ-2ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ
ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಅವರ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕಃ 26-03-2026

(ಶ್ರೀಮತಿ ತಯ್ಯಬಾ ಸುಲ್ತಾನಾ)
ಹಿರಿಯ ಸಿವಿಲ್ ಮತ್ತು ಪ್ರ.ದ.ನ್ಯಾ.
ದಂಡಾಧಿಕಾರಿಗಳು, ಜೇವರ್ಗಿ